**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಕರ್ನಾಟಕ ವಿಧಾನ ಮಂಡಲದ ಅಧೀನ ಶಾಸನ ರಚನಾ ಸಮಿತಿಯು ಸರ್ಕಾರವು ರಚಿಸುವ ನಿಬಂಧನೆ, ನಿಯಮಗಳ ಬಗ್ಗೆ.

**ಓದಲಾಗಿದೆ:** ಅರೆ ಸರ್ಕಾರಿ ಪತ್ರ ಸಂಖ್ಯೆ: ಅಸಪ/ಕವಿಸಸ/31/ಅಶಾರಸ/2013,ದಿ:17.10.2013

****

ಪ್ರಸ್ತಾವನೆ:

ಮೇಲೆ ಓದಲಾದ ಜಂಟಿ ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ ಸಚಿವಾಲಯ ಇವರ ಅರೆ ಸರ್ಕಾರಿ ಪತ್ರದಲ್ಲಿ ತಮ್ಮ ಇಲಾಖೆಯು ಕಳೆದ ಮೂರು ವರ್ಷಗಳಿಂದ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಕಾಯ್ದೆ ಅಡಿಯಲ್ಲಿ ಹೊರಡಿಸಲಾಗಿರುವ ನಿಬಂಧನೆಗಳು, ನಿಯಮ, ಉಪ-ನಿಯಮ, ಅಧಿಸೂಚನೆ ಹಾಗೂ ಉಪ-ವಿಧಿ(ಬೈಲಾ) ಮುಂತಾದವುಗಳು ವಿಧಾನ ಮಂಡಲದ ಉಭಯ ಸದನಗಳಲ್ಲಿ ಮಂಡನೆಯಾಗದಿದ್ದಲ್ಲಿ, ಅವುಗಳನ್ನು ಕಳುಹಿಸಿಕೊಡಲು ಹಾಗೂ ಈ ಎಲ್ಲಾ ಪ್ರಕ್ರಿಯೆಯನ್ನು ನೋಡಿಕೊಳ್ಳಲು ತಮ್ಮ ಇಲಾಖೆ ವತಿಯಿಂದ ನೇಮಿಸಲಾಗಿರುವ ನೋಡಲ್ ಅಧಿಕಾರಿಯವರ ಹೆಸರು ಹಾಗೂ ಅವರ ದೂರವಾಣಿ ಸಂಖ್ಯೆಯ ಮಾಹಿತಿಯನ್ನು ಸಮಿತಿಗೆ ಒದಗಿಸುವುದರ ಜೊತೆಗೆ ತಮ್ಮ ಇಲಾಖೆಯಿಂದ ಹೊರಡಿಸಲಾದ ಅಧಿಸೂಚನೆ/ನಿಯಮ ಅನುಬಂಧ ಇತ್ಯಾದಿಗಳ ಕಾಂಪೆಂಡಿಯಮ್ ಪ್ರತಿಯನ್ನು ಸಚಿವಾಲಯಕ್ಕೆ ಕಳುಹಿಸಲು ಕೋರಿರುತ್ತಾರೆ.

ಅದರಂತೆ ಪ್ರಸ್ತಾವನೆಯನ್ನು ಪರಿಶೀಲಿಸಿ ಸರ್ಕಾರವು ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ ಸಕಇ 162 ಸಮನ್ವಯ 2013,**
**ಬೆಂಗಳೂರು, ದಿನಾಂಕ: 20.06.2014**

ಪ್ರಸ್ತಾವನೆಯಲ್ಲಿ ವಿವರಿಸಲಾದ ಕಾರಣಗಳ ಹಿನ್ನೆಲೆಯಲ್ಲಿ ಕರ್ನಾಟಕ ವಿಧಾನ ಮಂಡಲದ ಅಧೀನ ಶಾಸನ ರಚನಾ ಸಮಿತಿಯು ಕಳೆದ ಮೂರು ವರ್ಷಗಳಿಂದ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಕಾಯ್ದೆ ಅಡಿಯಲ್ಲಿ ಹೊರಡಿಸಲಾಗಿರುವ ನಿಬಂಧನೆಗಳು, ನಿಯಮ, ಉಪ-ನಿಯಮ, ಅಧಿಸೂಚನೆ ಹಾಗೂ ಉಪ-ವಿಧಿ(ಬೈಲಾ) ಮುಂತಾದವುಗಳನ್ನು ವಿಧಾನ ಮಂಡಲದ ಉಭಯ ಸದನಗಳಿಗೆ ಕಳುಹಿಸಿಕೊಡಲು ಹಾಗೂ ಈ ಎಲ್ಲಾ ಪ್ರಕ್ರಿಯೆಯನ್ನು ನೋಡಿಕೊಳ್ಳಲು ಶ್ರೀಮತಿ ವಿ.ರತ್ನಮ್ಮ, ಸರ್ಕಾರದ ಅಧೀನ ಕಾರ್ಯದರ್ಶಿ-3, ಸಮಾಜ ಕಲ್ಯಾಣ ಇಲಾಖೆ (ದೂರವಾಣಿ ಸಂಖ್ಯೆ: 22034599) ಇವರನ್ನು ನೋಡಲ್ ಅಧಿಕಾರಿಯನ್ನಾಗಿ ನೇಮಿಸಿ ಆದೇಶಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ನಂಜುಂಡಪ್ಪ)
ಸರ್ಕಾರದ ಉಪ ಕಾರ್ಯದರ್ಶಿ-2
ಸಮಾಜ ಕಲ್ಯಾಣ ಇಲಾಖೆ.

ಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಜಂಟಿ ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ ಸಚಿವಾಲಯ, ವಿಧಾನ ಸೌಧ, ಬೆಂಗಳೂರು.

3. ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
5. ಸಕಾರದ ಉಪ ಕಾರ್ಯದರ್ಶಿಗಳು 1 & 2 ,ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
6. ಸರ್ಕಾರದ ಅಧೀನ ಕಾರ್ಯದರ್ಶಿಗಳು 1,2 & 3, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
7. ಶಾಖಾಧಿಕಾರಿಗಳು ಎ.ಬಿ & ಸ್ವೀಮರ ಶಾಖೆ, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
8. ಶಾಖೆ / ರಕ್ಷಾ ಕಡತ
9. ಹೆಚ್ಚುವರಿ ಪ್ರತಿಗಳು